ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2016-17** **ದಿನಾಂಕ: 14-10-2016**

# ಪತ್ರಿಕಾ ಆಮಂತ್ರಣ

1. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಭೂಮಿಪೂಜೆ ಸಮಾರಂಭ.

   ಉದ್ಘಾಟನೆ: ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

   ಘನ ಉಪಸ್ಥಿತಿ: ಡಿ.ಹೆಚ್. ಶಂಕರಮೂರ್ತಿ, ವಿಧಾನ ಪರಿಷತ್ತಿನ ಸಭಾಪತಿಗಳು

   ಕೆ.ಬಿ. ಕೋಳಿವಾಡ, ವಿಧಾನಸಭಾಧ್ಯಕ್ಷರು.

   ಅಧ್ಯಕ್ಷತೆ: ಆರ್. ರೋಷನ್ ಬೇಗ್, ನಗರಾಭಿವೃದ್ಧಿ, ನಗರಪಾಲಿಕೆ ಹಾಗೂ ಹಜ್ ಸಚಿವರು.

   ದಿನಾಂಕ: 15-10-2016 ಶನಿವಾರ ಬೆಳಗ್ಗೆ 10-00 ಗಂಟೆಗೆ

   ಸ್ಥಳ: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ತಪೋವನ (ರಾಕ್ ಗಾರ್ಡನ್)

   ಶಾಸಕರ ಭವನದ ಮುಂಭಾಗ, ಬೆಂಗಳೂರು.

ಪತ್ರಿಕಾ ಪ್ರಕಟಣೆ

# ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ : ಭೂಮಿಪೂಜೆ ಸಮಾರಂಭ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 15 ರ ಶನಿವಾರ ಬೆಳಿಗ್ಗೆ 10.00 ಗಂಟೆಗೆ ಶಾಸಕರ ಭವನದ ಮುಂಭಾಗದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ತಪೋವನ (ರಾಕ್ ಗಾರ್ಡನ್) ಬಳಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಭೂಮಿ ಪೂಜೆ ಸಮಾರಂಭವನ್ನು ಹಮ್ಮಿಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು ಭೂಮಿ ಪೂಜಾ ಕಾರ್ಯಕ್ರಮವನ್ನು ನೆರವೇರಿಸಲಿದ್ದಾರೆ. ಶ್ರೀ ಶ್ರೀ ಪ್ರಸನ್ನನಂದಾಪುರಿ ಮಹಾಸ್ವಾಮಿಗಳು, ರಾಜನಹಳ್ಳಿ ವಾಲ್ಮೀಕಿ ಗುರುಪೀಠ ಹಾಗೂ ಶ್ರೀ ಶ್ರೀ ಸಂಜಯಕುಮಾರ ಸ್ವಾಮೀಜಿಗಳು, ಶಿಡ್ಲೆಕೋಣ ಗುರುಪೀಠ ಇವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿದೆ.

ಸಮಾರಂಭದಲ್ಲಿ ಸಭಾಪತಿಗಳು, ಸಭಾಧ್ಯಕ್ಷರು, ಸಚಿವರುಗಳೂ, ವಿರೋಧ ಪಕ್ಷದ ನಾಯಕರು, ಪೂಜ್ಯ ಮಹಾಪೌರರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ತಿನ ಸದಸ್ಯರು, ಲೋಕಸಭಾ ಸದಸ್ಯರು, ವಿಶೇಷ ಆಹ್ವಾನಿತರು, ಸರ್ಕಾರದ ಕಾರ್ಯದರ್ಶಿಗಳು, ಆಹ್ವಾನಿತರು, ವಾಲ್ಮೀಕಿ ಸಮಾಜದ ರಾಜ್ಯ ಮಟ್ಟದ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಕಲಾವಿದರುಗಳು ಪಾಲ್ಗೊಳ್ಳಲಿದ್ದಾರೆ.

ಎಚ್‌ಕೆ/ಜಿಪಿಆರ್.

# <u>ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ</u>

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. **ದಿನಾಂಕ : 16-10-2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀಮಂತ ಚಿಂಚನಸೂರು ಮತ್ತು ತಂಡ, ಕಲಬುರ್ಗಿ ಜಿಲ್ಲೆ ರವರಿಂದ ಜಾನಪದ ಗೀತೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ

2) ಸಂಜೆ 04.00 ಗಂಟೆಯಿಂದ ಸಂಜೆ 05.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ , ಬೆಂಗಳೂರು ರವರು ಪ್ರಾಯೋಜಿತ ಅಕ್ಷಯ ಫೌಂಡೇಷನ್ , ಬೆಂಗಳೂರು ರವರು ರಮೇಶ್ ಹೊಸದೊಡ್ಡಿ , ಕನ್ನಡ ಉಪನ್ಯಾಕರು ಮತ್ತು ಸಾಹಿತಿಗಳಿಂದ ಕನ್ನಡ ಭಾಷೆಯ ಮುಂದಿನ ಸವಾಲುಗಳು ಕುರಿತು ಉಪನ್ಯಾಸ ಹಾಗೂ ಯೇಜಸ್ ಮತ್ತು ತಂಡದವರಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಿದೆ.

3) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ .ಲೋಕೇಶ್ ಹೆಚ್.ಎಸ್. ಮತ್ತು ತಂಡ,ಚೆನ್ನಪಟ್ಟಣ ,ರಾಮನಗರ ಜಿಲ್ಲೆ ರವರಿಂದ ತತ್ವ ಗೀತೆ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

5) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ** ಸಹಯೋಗದೊಂದಿಗೆ ಅದ್ವೈತ ಸಾಂಸ್ಕೃತಿಕ ಕೇಂದ್ರ, ಬೆಂಗಳೂರು ರವರಿಂದ ಯೋಗಾ ಮತ್ತು ಭಾರತೀಯ ಸಮಕಾಲೀನ ನೃತ್ಯ (Indian contemporary Dance) ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ , ಮಾಗಡಿ ರೋಡ್, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ** ಸಹಯೋಗದೊಂದಿಗೆ ಚಿನ್ಮುದ್ರ ಅಕಾಡೆಮಿ ಆಫ್ ಫರ್ ಫಾರ್ಮಿಂಗ್ ಆರ್ಟ್ಸ್, ಇಂದಿರಾನಗರ, **ಬೆಂಗಳೂರು ರವರ** ಸಂಸ್ಥೆಯ ಕಲಾವಿದರುಗಳಾದ ಕು. ಶುಭಧ ಪ್ರಭಾಕರ್ ರವರಿಂದ **ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

**ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಸಿದ್ಧಪಡಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಎಚ್‌ಕೆ:ಜಿಪಿಆರ್